ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಸಚಿವಾಲಯ - ವಿರೋಧ ಪಕ್ಷದ ಕಾರ್ಯಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 30/10/20

# 'ವಿಶೇಷ ಅಧಿವೇಶನಕ್ಕೆ ಆಗ್ರಹ'

ಪ್ರ. ವಾ. 30-10-20

ಬೆಂಗಳೂರು: 'ಉತ್ತರ ಕರ್ನಾಟಕದ ಪ್ರವಾಹ ಸಂತ್ರಸ್ತರಿಗೆ ತಕ್ಷಣ ಪರಿಹಾರ ಒದಗಿಸುವ ಜತೆಗೆ ಹಾನಿಗೊಳಗಾಗಿರುವ ಎಲ್ಲ ಮೂಲಸೌಕರ್ಯಗಳನ್ನು ಮರು ನಿರ್ಮಿಸಬೇಕು' ಎಂದು ಆಗ್ರಹಿಸಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಮುಖ್ಯಮಂತ್ರಿ ಅವರಿಗೆ ಪತ್ರ ಬರೆದಿದ್ದಾರೆ.

ಪ್ರವಾಹ ಪರಿಸ್ಥಿತಿ ನಿಭಾಯಿಸಲು ಸರ್ಕಾರ ಕೈಗೊಂಡಿರುವ ಹಾಗೂ ಕೈಗೊಳ್ಳಬೇಕಾದ ಕ್ರಮಗಳನ್ನು ಚರ್ಚಿಸಲು ತುರ್ತಾಗಿ ವಿಧಾನಸಭೆ ವಿಶೇಷ ಅಧಿವೇಶನ ಕರೆಯಬೇಕು ಎಂದೂ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಪ್ರವಾಹಪೀಡಿತ ಪ್ರದೇಶಗಳಿಗೆ ಸಿದ್ದರಾಮಯ್ಯ ಇತ್ತೀಚೆಗೆ ಭೇಟಿ ನೀಡಿದ್ದರು. ಅಲ್ಲಿಯ ಪರಿಸ್ಥಿತಿ ಆಧರಿಸಿ ಅವರು ಈ ಪತ್ರ ಬರೆದಿದ್ದಾರೆ.